ಹೊಸ ನ್ಯಾಯಬೆಲೆ ಅಂಗಡಿಗಳು

1026 (398) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2010–11ನೇ ಆಯವ್ಯಯದಲ್ಲಿ ಹೊಸ ನ್ಯಾಯಬೆಲೆ ಅಂಗಡಿಯನ್ನು ಪ್ರಾರಂಭಿಸಲು ಅನುಮತಿ ನೀಡುವ ವಿಚಾರ ಸರ್ಕಾರದ ಮುಂದಿರುವುದೇ;

ಹಾಗಿದ್ದಲ್ಲಿ, ವಿವರ ನೀಡುವುದು?

ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) 2010–11 ನೇ ಅಯವ್ಯಯದಲ್ಲಿ ಹೊಸನ್ಯಾಯಬೆಲೆ ಅಂಗಡಿ ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

ಆದರೆ, 1992ರ ಅವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 300 ಪಡಿತರ ಚೀಟಿಗಳು ಹಾಗೂ ಪಟ್ಟಣ ಪ್ರದೇಶಗಳಲ್ಲಿ 500 ಪಡಿತರ ಚೀಟಿಗಳು ಲಭ್ಯವಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಪರ ನಿರ್ದೇಶಕರು ನ್ಯಾಯಬೆಲೆ ಅಂಗಡಿಗಳಿಗೆ ನಿಯಮಾನುಸಾರ ಅಧಿಸೂಚನೆಯನ್ನು ಹೊರಡಿಸಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವರು.

ಪಾಂಡವಪುರ ಸಕ್ಕರೆ ಕಾರ್ಖಾನೆ

1027 (1080) ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಪಾಂಡವಪುರ ಸಕ್ಕರೆ ಕಾರ್ಖಾನೆಯನ್ನು ಪುನರಾಂಭಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾರ್ಖಾನೆಯನ್ನು ಎಂದು ಪುನರಾಂಭ ಮಾಡಲಾಗುವುದು (ಮಾಹಿತಿ ನೀಡುವುದು);

ಇ) ಸಕ್ಕರೆ ಕಾರ್ಖಾನೆಯ ಕಾರ್ಮಿಕರ ಹಾಗೂ ಕಬ್ಬು ಸರಬರಾಜು ಮಾಡಿದ ರೈತರ ಬಾಕಿ ಹಣವನ್ನು ಪಾವತಿ ಮಾಡಲಾಗುವುದೇ, ಹಾಗಿದ್ದಲ್ಲಿ, ಎಂದು ಪಾವತಿ ಮಾಡಲಾಗುವುದು?

ಶ್ರೀ ಶಿವರಾಜ ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು) : ಅ) ಹೌದು.

ಆ) ಕಾರ್ಖಾನೆಯನ್ನು ಈ ಹಿಂದೆ ಗುತ್ತಿಗೆ ಪಡೆದಿದ್ದ ಮೆ: ಕೊಥಾರಿ ಶುಗರ್ಸ್ ಅಂಡ್ ಕೆಮಿಕಲ್ಸ್ ಲಿ., ರವರು ಗುತ್ತಿಗೆ ಒಪ್ಪಂದವನ್ನು ಖೈದುಗೊಳಿಸಿರುವ ಹಿನ್ನೆಲೆಯಲ್ಲಿ ಅವರು ಕಾರ್ಖಾನೆಗೆ ನೀಡಬೇಕಾಗಿರುವ ಬಾಕಿಗಳನ್ನು ಪಾವತಿಸಿದ್ದಲ್ಲಿ ಕಾರ್ಖಾನೆಯ ಗುತ್ತಿಗೆಯನ್ನು ಅಂತಿಮಗೊಳಿಸಬಹುದೆಂದು ತೀರ್ಮಾನಿಸಲಾಗಿರುತ್ತದೆ. ಅದರಂತೆ ಬಾಕಿ ಹಣ ಪಾವತಿಸಲು ಸೂಚನೆ ನೀಡುವುದಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಅವರು ಬಾಕಿ ಹಣ ಪಾವತಿ ಮಾಡಿದ ತಕ್ಷಣವೇ ಕಾರ್ಖಾನೆಯನ್ನು ಹೊಸದಾಗಿ ಗುತ್ತಿಗೆಗೆ ನೀಡಲು ಕ್ರಮ ಕೈಗೊಂಡು, 2010–2011ನೇ ಹಂಗಾಮಿನಿಂದ ಕಾರ್ಖಾನೆ ಪುನರಾರಂಭಕ್ಕೆ ಕ್ರಮ ವಹಿಸಲಾಗುವುದು.

ಇ) ಮೆ: ಕೊಥಾರಿ ಶುಗರ್ಸ್ ಅಂಡ್ ಕೆಮಿಕಲ್ಸ್ ಲಿ., ಸಂಸ್ಥೆಯವರು ನೀಡಬೇಕಾಗಿರುವ ಬಾಕಿ ಮೊಬಲಗನ್ನು ಪಾವತಿ ಮಾಡಿದ ನಂತರ ಕಾರ್ಖಾನೆಯ ಕಾರ್ಮಿಕರ ವೇತನ ಪಾವತಿಸಲು ಕ್ರಮ ವಹಿಸಲಾಗುವುದು. ಅದರಂತೆಯೇ ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಬಾಕಿ ಹಣದ ಬಗ್ಗೆ ಕ್ರಮ ಕೈಗೊಳ್ಳಲು ಕಾರ್ಖಾನೆಗೆ ಸೂಕ್ತ ಸೂಚನೆ ನೀಡಲಾಗುವುದು.

ಸಕ್ಕರೆ ಕಾರ್ಖಾನೆಯ ಪುನಶ್ಚೇತನ

1028 (1081). ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಸಕ್ಕರೆ ಕಾರ್ಖಾನೆಯ ಪುನಶ್ಚೇತನಕ್ಕಾಗಿ ಸರ್ಕಾರ ಕ್ರಮ ಕೈಗೊಂಡಿರುವುದೇ?

ಆ) ಹಾಗಿದ್ದಲ್ಲಿ, ಇಲ್ಲಿಯವರೆವಿಗೆ ಖರ್ಚು ಮಾಡಿರುವ ಹಾಗೂ ಅಗತ್ಯವಿರುವ ಹಣವೆಷ್ಟು (ಪೂರ್ಣ ಮಾಹಿತಿ ನೀಡುವುದು)?